# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 955 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.03.2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ<br>ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ |
|---|---|
| ಅ) | ರಾಜ್ಯದಲ್ಲಿ ಅತೀ ವೇಗವಾಗಿ ಬೆಳೆಯುತ್ತಿರುವ ಬೆಳಗಾವಿ ಜಿಲ್ಲೆಯೂ ಶೈಕ್ಷಣಿಕ ರಂಗದಲ್ಲಿ ಮುಂಚೂಣಿಯಲ್ಲಿರುವ ಮೂರು ವಿಶ್ವವಿದ್ಯಾಲಯ, ಮೆಡಿಕಲ್ ಕಾಲೇಜು, ಪ್ಯಾರಾ ಮೆಡಿಕಲ್, ನರ್ಸಿಂಗ್ ಮೊದಲಾಗಿ ಹಲವಾರು ಶಿಕ್ಷಣ ಸಂಸ್ಥೆಗಳಿರುವ ಹಿನ್ನಲೆಯಲ್ಲಿ ಬೆಳಗಾವಿ ಜಿಲ್ಲೆಯಷ್ಟೇ ಅಲ್ಲದೇ ಹೊರ ಜಿಲ್ಲೆಗಳಿಂದಲೂ ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ಬೆಳಗಾವಿಗೆ ಬರುತ್ತಿದ್ದು, 60 ಲಕ್ಷಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ಈ ಜಿಲ್ಲೆಯಲ್ಲಿ ಪ್ರತಿ ವರ್ಷ ಬೇಡಿಕೆಗೆ ತಕ್ಕಷ್ಟು ವಿದ್ಯಾರ್ಥಿ ವಸತಿ ನಿಲಯಗಳು ಇಲ್ಲದ ಕಾರಣ ಹಿಂದುಳಿದ ವರ್ಗಗಳ ಸಾವಿರಾರು ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯಗಳು ಇಲ್ಲದೇ ಶಿಕ್ಷಣಕ್ಕೆ ಪರದಾಡುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; |
| ಆ) | ಪ್ರತಿ ವರ್ಷ ಸಾವಿರಾರು ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸುತ್ತಿದ್ದು, ಇದರಲ್ಲಿ ಕೇವಲ ಶೇ.25ರಷ್ಟು ಮಾತ್ರ ಪ್ರವೇಶ ದೊರಕುತ್ತಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ; |
| ಇ) | ಸದರಿ ಜಿಲ್ಲೆಯಲ್ಲಿ ಸರ್ಕಾರಿ ವಿದ್ಯಾರ್ಥಿನಿಲಯಗಳಿಗೆ ಹೆಚ್ಚು ಬೇಡಿಕೆ ಇರುವುದರಿಂದ ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸಲು ಸರ್ಕಾರ ಯೋಜಿಸಿದೆಯೇ; |

## ಉತ್ತರ

ಬೆಳಗಾವಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 100 ಮೆಟ್ರಿಕ್ ಪೂರ್ವ ಹಾಗೂ 67 ಮೆಟ್ರಿಕ್ ನಂತರದ ಹೀಗೆ ಒಟ್ಟು 167 ವಿದ್ಯಾರ್ಥಿ ನಿಲಯಗಳು ಕಾರ್ಯ ನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಲ್ಲಿ 14695 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿರುತ್ತದೆ. ವಿವರಗಳು ಈ ಕೆಳಕಂಡಂತಿವೆ.

| ವಿದ್ಯಾರ್ಥಿ ನಿಲಯ ವಿಧ | ವಿದ್ಯಾರ್ಥಿ ನಿಲಯಗಳ ಸಂಖ್ಯೆ | ಮಂಜೂರಾತಿ ಸಂಖ್ಯೆ | ಸ್ವೀಕೃತವಾದ ಅರ್ಜಿಗಳ ಸಂಖ್ಯೆ | ಪ್ರವೇಶ ಪಡೆದ ಅರ್ಜಿಗಳ ವಿವರ | | | ಬಾಕಿ ಉಳಿದ ಅರ್ಜಿಗಳ ವಿವರ |
|---|---|---|---|---|---|---|---|
| | | | | ನವೀಕರಣ | ಹೊಸದು | ಒಟ್ಟು | |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 100 | 5250 | 4153 | 3314 | 1936 | 5250 | 2217 |
| ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು | 67 | 9445 | 27833 | 4071 | 5374 | 9445 | 22459 |
| **ಒಟ್ಟು** | **167** | **14695** | **31896** | **7385** | **7310** | **14695** | **24676** |

ಮುಂದುವರೆದು, ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶ ಕೋರಿ ಅರ್ಜಿ ಸಲ್ಲಿಸಿ ಪ್ರವೇಶ ದೊರಕದ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ರೂ.1500/-ರಂತೆ 10 ತಿಂಗಳ ಅವಧಿಗೆ ಒಟ್ಟು ರೂ.15000/-ಗಳ ಸಹಾಯಧನವನ್ನು ಮಂಜೂರು ಮಾಡಲಾಗುವುದು.

2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ 100 ಸಂಖ್ಯಾಬಲದ ಮೆಟ್ರಿಕ್ ನಂತರದ 75 ಬಾಲಕರ ಮತ್ತು 75 ಬಾಲಕಿಯರ ವಸತಿ ನಿಲಯಗಳನ್ನು ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭಿಸಲು ಸರ್ಕಾರದ ಆದೇಶ ದಿನಾಂಕ:18-06-2024ರಲ್ಲಿ ಮಂಜೂರಾತಿ ನೀಡಿ ವಿದ್ಯಾರ್ಥಿ ನಿಲಯಗಳನ್ನು ಪ್ರಸಕ್ತ ಸಾಲಿನಿಂದಲೆ ಪ್ರಾರಂಭಿಸಿ ಒಟ್ಟು 15000 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ. ಅದರಂತೆ ಬೆಳಗಾವಿ ಜಿಲ್ಲೆಗೆ 05 ಬಾಲಕರ ಮತ್ತು 03 ಬಾಲಕಿಯರ ಹೀಗೆ ಒಟ್ಟು 08 ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಪ್ರಸಕ್ತ ಸಾಲಿನಿಂದಲೇ ಸದರಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ.

…2..

| | | |
|---|---|---|
| ಈ) | ಯಾವಾಗ ಈ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ಮತ್ತು ಪ್ರಸಕ್ತ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸಲಾಗುವುದು? (ಮಾಹಿತಿ ನೀಡುವುದ) | ಬೆಳಗಾವಿ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿ ಕೈಗೊಂಡಿರುವ ವಿದ್ಯಾರ್ಥಿನಿಲಯಗಳ ಕಟ್ಟಡ ಕಾಮಗಾರಿಗಳ ಪ್ರಗತಿ ವಿವರಗಳು ಕೆಳಕಂಡಂತಿವೆ:- |

| ಕ್ರ. ಸಂ | ಮಂಜೂರಾದ ವರ್ಷ | ವಿದ್ಯಾರ್ಥಿ ನಿಲಯದ ಹೆಸರು | ನಿರ್ಮಾಣ ಏಜೆನ್ಸಿ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ಪ್ರಗತಿ ವಿವರ |
|---|---|---|---|---|---|
| 1. | 2022-23 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯ, ಸವದತ್ತಿ | ಕೆ.ಹೆಚ್.ಬಿ | 500.00 | 3ನೇ ಮಹಡಿ ಕಾಂಕ್ರಿಟ್ ಕಾಮಗಾರಿ ಪೂರ್ಣ ಗೊಂಡಿರುತ್ತದೆ |
| 2. | 2022-23 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಖಾನಾಪುರ | ಕೆ.ಹೆಚ್.ಬಿ | 500.00 | ಪ್ಲಾಸ್ಟರಿಂಗ್ ಕಾಮಗಾರಿ ಪ್ರಗತಿಯಲ್ಲಿದೆ |
| 3. | 2024-25 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿ ನಿಲಯ, ಸವದತ್ತಿ | ಕೆ.ಹೆಚ್.ಬಿ | 400.00 | ಕಾಮಗಾರಿ ಪ್ರಾರಂಭಿಸಬೇಕಿರುತ್ತದೆ |
| 4. | 2024-25 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಮುನವಳ್ಳಿ, ಸವದತ್ತಿ | ಕೆ.ಹೆಚ್.ಬಿ | 400.00 | ಕಾಮಗಾರಿ ಪ್ರಾರಂಭಿಸಬೇಕಿರುತ್ತದೆ |
| 5. | 2024-25 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಆನಗೋಳ, ಬೆಳಗಾವಿ ತಾಲ್ಲೂಕು (ಆರ್.ಐ.ಡಿ.ಎಫ್-ಟ್ರಾಂಚ್-30) | ಕೆ.ಹೆಚ್.ಬಿ | 500.00 | ಕಾಮಗಾರಿ ಪ್ರಾರಂಭಿಸಬೇಕಿರುತ್ತದೆ |

ಸಂಖ್ಯೆ: ಹಿಂವಕ 326 ಬಿಎಂಎಸ್ 2025

(ಶಿವರಾಜ.ಎಸ್.ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.